# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2018-19ನೇ ಸಾಲಿನಲ್ಲಿ 09 ಜಿಲ್ಲೆಯಲ್ಲಿರುವ 12 ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

****

**ಓದಲಾಗಿದೆ :** 1) ಸರ್ಕಾರಿ ಆದೇಶ ಸಂಖ್ಯೆ: MWD 139 CWF 77 ದಿನಾಂಕ:23-08-1979

2) ಸರ್ಕಾರಿ ಆದೇಶ ಸಂಖ್ಯೆ: MWD 52 WES 2018, ದಿನಾಂಕ:26-05-2018, ಮತ್ತು 04-08-2018

3) ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಇವರ ಪತ್ರ ಸಂಖ್ಯೆ: KBW/A6-2/GTS/GEN/04/2016-17,ದಿನಾಂಕ:15-09-2018.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿನ ವಕ್ಫ್ ಸಂಸ್ಥೆಗಳಿಗೆ Grant-in Aid Code ಅನ್ನು ಆಗಸ್ಟ್ 1979 ರಲ್ಲಿ ಜಾರಿಗೊಳಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ವಕ್ಫ್ ಸಂಸ್ಥೆಗಳ ಜೀರ್ಣೋದ್ಧಾರ ಹಾಗೂ ದುರಸ್ಥಿಗಾಗಿ 2018-19ನೇ ಸಾಲಿಗೆ ಲೆಕ್ಕ ಶೀರ್ಷಿಕೆ 2225-03-277-3-08(059) (ಯೋಜನೆ) ರಡಿಯಲ್ಲಿ ಸರ್ಕಾರವು ರೂ.1000.00ಲಕ್ಷಗಳ ಅನುದಾನವನ್ನು ನಿಗಧಿಪಡಿಸಿ ಮೊದಲನೇ ಹಾಗೂ ಎರಡನೇ ತ್ರೈಮಾಸಿಕ ಕಂತಿನ ಅನುದಾನ ಒಟ್ಟು ರೂ.500.00ಲಕ್ಷ ಮಂಜೂರು ಮಾಡಲಾಗಿದೆ.

ಮೇಲೆ (3) ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಿಂದ ಪ್ರಸ್ತಾವನೆಗಳನ್ನು ಪಡೆಯಲಾಗಿದ್ದು ಇವುಗಳನ್ನು ಪರಿಶೀಲಿಸಿ 07 ಜಿಲ್ಲೆಗಳ 12 ವಕ್ಫ್ ಸಂಸ್ಥೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಲು ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: MWD 21 WGA 2018, ಬೆಂಗಳೂರು, ದಿನಾಂಕ: 25-09-2018

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಅನುಬಂಧದಲ್ಲಿ ಸೂಚಿಸಿರುವ ರಾಜ್ಯದ 07 ಜಿಲ್ಲೆಗಳ 12 ವಕ್ಫ್ ಸಂಸ್ಥೆಗಳಿಗೆ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಒಟ್ಟು **ರೂ.1,48,00000/-(ಒಂದು ಕೋಟಿ ನಲವತ್ತೆಂಟು ಲಕ್ಷ ರೂಪಾಯಿಗಳು ಮಾತ್ರ)** ಅನುದಾನವನ್ನು ಮಂಜೂರು ಮಾಡಿದ್ದು ಆ ಸಂಸ್ಥೆಗಳ ಎದುರಿಗೆ ಸೂಚಿಸಲಾಗಿರುವ ಆಯಾ ಯೋಜನೆಗೆ ಸಂಬಂಧಿಸಿದಂತೆ ಪ್ರತ್ಯೇಕ ಮೊತ್ತವನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಲು ಆದೇಶಿಸಿದೆ.

**ಷರತ್ತುಗಳು:-**

1. ಅನುಬಂಧದಲ್ಲಿ ಸೂಚಿಸಿರುವ ಸಂಸ್ಥೆಗಳು ವಕ್ಫ್ ಮಂಡಳಿಯಲ್ಲಿ ನೋಂದಣಿಯಾಗಿದೆಯೇ ಎಂಬುದರ ಬಗ್ಗೆ ಪರಿಶೀಲಿಸಿ ಅನುದಾನ ಬಿಡುಗಡೆ ಮಾಡತಕ್ಕದ್ದು.

..........2

2. ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2225-03-277-3-08(059)" ವಕ್ಫ್ ಸಂಸ್ಥೆಗಳ ದುರಸ್ಥಿ ಹಾಗೂ ಜೀರ್ಣೋದ್ಧಾರಕ್ಕಾಗಿ (ಯೋಜನೆ) ಅಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.

3. ಮೇಲೆ ಓದಲಾದ (1)ರ ಆದೇಶದಂತೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯು Grant-in-Aid ನಲ್ಲಿರುವ ಸೂಚನೆಗಳನ್ನು ವಕ್ಫ್ ಸಂಸ್ಥೆಗಳಿಗೆ ಹಣ ಬಿಡುಗಡೆಗೊಳಿಸುವ ಮುನ್ನ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

4. ರೂ.5.00 ಲಕ್ಷಕ್ಕಿಂತ ಹೆಚ್ಚು ಅನುದಾನ ಮಂಜೂರು ಮಾಡಲಾಗಿರುವ ವಕ್ಫ್ ಸಂಸ್ಥೆಗಳಿಗೆ ಮೊದಲನೇ ಕಂತಿನ ರೂ.5.00 ಲಕ್ಷಗಳನ್ನು ಪ್ರಥಮ ಕಂತಿನಲ್ಲಿ ಬಿಡುಗಡೆ ಮಾಡಿ ಇನ್ನುಳಿದ ಮೊತ್ತವನ್ನು ಎರಡನೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು. ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ ಮೊದಲು ಕಾಮಗಾರಿಯ ಪ್ರಗತಿಯನ್ನು ಕಡ್ಡಾಯವಾಗಿ ಪರಿಶೀಲಿಸಿ ಪ್ರಗತಿಯಾದಲ್ಲಿ ಮಾತ್ರ ಅನುದಾನ ಬಿಡುಗಡೆ ಮಾಡತಕ್ಕದ್ದು.

5. ರೂ.5.00ಲಕ್ಷಕ್ಕಿಂತ ಕಡಿಮೆ ಅನುದಾನ ಮಂಜೂರಾಗಿರುವ ವಕ್ಫ್ ಸಂಸ್ಥೆಗಳಿಗೆ ಅನುದಾನವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು.

6. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಮತ್ತು ಜಿಲ್ಲಾ ವಕ್ಫ್ ಸಲಹಾ ಸಮಿತಿಯವರು ಆದೇಶ ಹೊರಡಿಸಿದ 2 ತಿಂಗಳ ಒಳಗಾಗಿ ಸದರಿ ಎಲ್ಲಾ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡುವುದು, ಸದರಿ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಹಣ ಬಿಡುಗಡೆಗೊಳಿಸಲಾಗಿದೆಯೋ ಆ ಉದ್ದೇಶಕ್ಕಾಗಿ ಬಳಕೆಯಾಗಿರುವ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಸಂಸ್ಥೆಗಳು ಕಡ್ಡಾಯವಾಗಿ ಕಳುಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 03 ಟಿಎಫ್‌ಪಿ 2018, ದಿನಾಂಕ:14.05.2018ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

C. Hemalatha 25/9/18

**(ಸಿ.ಹೇಮಲತ)**
ಸರ್ಕಾರದ ಉಪ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.

ಗೆ:

1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ವಿಧಾನ ಸೌಧ, ಬೆಂಗಳೂರು.

..........3

4) ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
6) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಗ್ರಾಹಕರ ವ್ಯವಹಾರಗಳು ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಹಾಗೂ ಹಜ್ ಸಚಿವರ ಆಪ್ತ ಕಾರ್ಯದರ್ಶಿಗಳು,
7) ಅಧ್ಯಕ್ಷರು/ವಕ್ಫ್ ಅಧಿಕಾರಿಗಳು, ಬೆಂಗಳೂರುನಗರ, ಚಾಮರಾಜನಗರ, ತುಮಕೂರು, ಚಿತ್ರದುರ್ಗ, ಶಿವಮೊಗ್ಗ, ಚಿಕ್ಕಬಳ್ಳಾಪುರ, ಬಾಗಲಕೋಟೆ ಜಿಲ್ಲೆಗಳು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

~~~~~*****~~~~~~
~~~~~

# GOVERNMENT ORDER No. MWD 21 WGA 2018, DATED: 25/09/2018

| Sl. No. | Name of the Institution | Name of the District | Purpose | Sanctioned Amount (Rs.in Lakhs) |
|---|---|---|---|---|
| 1 | Anjuman-e-Ethyad-Ul-Muslimeen Educational, Kambipura, Mysore Road, Bengaluru | Bengaluru Urban | Repair & Renovation / Development of Masjid | 15.00 |
| 2 | Al Mustafa Charitable Trust, Bhoopsandra, Bengaluru | Bengaluru Urban | Repair & Renovation / Development of Masjid | 5.00 |
| 3 | Jamia masjid, Bandahalli Village, Kollegal Tq, Chamrajanagar | Chamraja Nagar | Repair & Renovation / Development of Masjid | 7.50 |
| 4 | Masjid-e-Aala, Bidanagere, Kunigal Tq, Tumakuru | Tumakuru | Repair & Renovation / Development of Masjid | 20.00 |
| 5 | Jumma Masjid, Lingamannahalli, Gubbi Tq, Tumakuru | Tumakuru | Repair & Renovation / Development of Masjid | 5.00 |
| 6 | Jamia Masjid, Hiriyur Town, Chitradurga | Chitradurga | Repair & Renovation / Development of Masjid | 20.00 |
| 7 | Jamia Masjid, Surgondanahally, Hiriyur Town, Chitradurga | Chitradurga | Repair & Renovation / Development of Masjid | 10.00 |
| 8 | Jamia Masjid, Gaznoor Post, Sakrebyl, Shivamogga | Shivamogga | Repair & Renovation / Development of Masjid | 7.50 |
| 9 | Katkatoor Madar Shah Vali Darga, Jamath-e-Ahle-islam, Chikballapura | Chikballapura | Repair & Renovation / Development of Dargah | 3.00 |

| | | | | |
|---|---|---|---|---|
| 10 | Jamia Masjid, Anjuman-e-Islam Committee, Gulegudda Tq, Bagalkot | Bagalkot | Repair & Renovation / Development of Masjid | **30.00** |
| 11 | Jamia Masjid, Hosur, Badami Tq, Bagalkot | Bagalkot | Repair & Renovation / Development of Masjid | **20.00** |
| 12 | Jamia Masjid, Mudhol Town & Tq, Bagalkot | Bagalkot | Repair & Renovation / Development of Masjid | **5.00** |
| | | | **TOTAL** | 148.00 |
| (ONE CRORE FORTY EIGHT LAKHS ONLY ) | | | | |

C. Hemalatha 25/9

(ಸಿ.ಹೇಮಲತ)

ಸರ್ಕಾರದ ಉಪ ಕಾರ್ಯದರ್ಶಿ

ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ.